**Bangalore**
**Regional News**
**16.04.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಉದ್ಯೋಗ ಮೇಳಕ್ಕೆ ಚಾಲನೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ
2. ರೈಲ್ವೆ ಕಾಮಗಾರಿಯಲ್ಲಿ ಗುಣಮಟ್ಟ ಕಾಪಾಡುವಂತೆ ಸಿಬ್ಬಂದಿಗೆ ಸೂಚನೆ ನೀಡಿದ ವಿ.ಸೋಮಣ್ಣ\
3. ಬೆಳಗಾವಿಯಲ್ಲಿ ಬಿಜೆಪಿ ಜನಾಕ್ರೋಶ ಯಾತ್ರೆ: ಬೆಲೆ ಏರಿಕೆ ವಿರುದ್ಧ ಆಕ್ರೋಶ
4. ಒಂದನೇ ತರಗತಿ ಸೇರ್ಪಡೆ ವಯೋಮಿತಿ ಗೊಂದಲ - ಪೋಷಕರಿಗೆ ಸ್ಪಷ್ಟೀಕರಣ ನೀಡಿದ ಶಿಕ್ಷಣ ಸಚಿವ

<><><>

ರಾಜ್ಯದಲ್ಲಿ ನಿರುದ್ಯೋಗ ನಿವಾರಣೆಗೆ "ಯುವ ನಿಧಿ" ಯೋಜನೆ ಜೊತೆಗೆ ಯುವಕರಿಗೆ ಕೌಶಲ್ಯ ತರಬೇತಿ ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಕಲಬುರಗಿಯಲ್ಲಿಂದು ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ ಉದ್ಘಾಟಿಸಿದ ಮುಖ್ಯಮಂತ್ರಿ, ಸಾಂಕೇತಿಕವಾಗಿ ಆಯ್ದ ಯುವಕರಿಗೆ ನೇಮಕಾತಿ ಪತ್ರ ವಿತರಿಸಿದರು. ಕೇಂದ್ರದಲ್ಲಿ ಹಾಗೂ ರಾಜ್ಯದಲ್ಲಿ ಹೂಡಿಕೆ ಹೆಚ್ಚಾದಷ್ಟೂ ಉದ್ಯೋಗ ಸೃಷ್ಟಿ ಹೆಚ್ಚಾಗುತ್ತದೆ ಎಂದು ತಿಳಿಸಿದರು.  ಸರ್ಕಾರ ಉದ್ಯೋಗ ಮೇಳ ಆಯೋಜಿಸುತ್ತಿದ್ದು, ದೇಶದ ನಿರುದ್ಯೋಗ ಪ್ರಮಾಣ ಶೇಕಡ ೧೮.೯ ಇದ್ದರೆ, ಕರ್ನಾಟಕದ ಪ್ರಮಾಣ ಶೇಕಡ ೨.೫ ಇದೆ ಎಂದು ಸ್ಪಷ್ಟಪಡಿಸಿದರು.

ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ

<><><>

ಪ್ರಣಾಳಿಕೆಯಲ್ಲಿ ಘೋಷಿಸಿದ ಕಾರ್ಯಕ್ರಮಗಳೆಲ್ಲಾ ಜಾರಿ ಆಗುತ್ತಿರುವುದು ಜನರ ಕಣ್ಣಿಗೆ ಕಾಣುತ್ತಿದೆ, ಬಿಜೆಪಿ ಕಣ್ಣಿಗೆ ಮಾತ್ರ ಕಾಣುತ್ತಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಕಲ್ಬುರ್ಗಿಯಲ್ಲಿಂದು ಗುಲ್ಬರ್ಗಾ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆವರಣದಲ್ಲಿ ೨೧೬ ಕೋಟಿ ರೂಪಾಯಿ ವೆಚ್ಚದ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಹಾಗೂ ೬ ಕೋಟಿ ೨೦ ಲಕ್ಷ ರೂಪಾಯಿ ವೆಚ್ಚದ ಬ್ರಾಕಿಥೆರಪಿ ವಿಕಿರಣ ಚಿಕಿತ್ಸೆ ಘಟಕ ಉದ್ಘಾಟಿಸಿದ ಅವರು, ೧೨ ಬೃಹತ್ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. ಪ್ರತೀ ಜಿಲ್ಲೆಯಲ್ಲಿ ವೈದ್ಯಕೀಯ ಕಾಲೇಜು, ಟ್ರಾಮಾ ಸೆಂಟರ್, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ಕ್ಯಾನ್ಸರ್ ಆಸ್ಪತ್ರೆ ಇರಲೇಬೇಕು ಎನ್ನುವುದು ಸರ್ಕಾರದ ಗುರಿ ಎಂದು

ಹೇಳಿದರು. ಬಡವರಿಗೂ ಉತ್ತಮ ಗುಣಮಟ್ಟದ ಆರೋಗ್ಯ ಸೇವೆ ಸಿಗಬೇಕು ಎಂದು ತಿಳಿಸಿದರು. ಸರ್ಕಾರದಲ್ಲಿ ಅಭಿವೃದ್ಧಿಗೆ ಹಣಕ್ಕೆ ಕೊರತೆ ಇಲ್ಲ ಎಂದು ಸ್ಪಷ್ಟಪಡಿಸಿದ ಅವರು, ಜನರಿಗೆ ಸರ್ಕಾರದ ಯೋಜನೆಗಳನ್ನು ತಲುಪಿಸಲು ನಿರಂತರವಾಗಿ ಶ್ರಮಿಸುತ್ತಿದೆ ಎಂದು ಹೇಳಿದರು. ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಚಿವರಾದ ಶರಣಪ್ರಕಾಶ್ ಪಾಟೀಲ್, ಪ್ರಿಯಾಂಕ್ ಖರ್ಗೆ, ಡಾ.ಎಂ.ಸಿ.ಸುಧಾಕರ್ ಉಪಸ್ಥಿತರಿದ್ದರು.

<><><><>

ತುಮಕೂರು ಜಿಲ್ಲೆಯ ಡಿ.ರಾಂಪುರದಲ್ಲಿ ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಇಂದು ವಿವಿಧ ರಸ್ತೆ ಕಾಮಗಾರಿಗಳಿಗೆ ಶಿಲಾನ್ಯಾಸ ನೆರವೇರಿಸಿದರು. ಬಳಿಕ ಮಾತನಾಡಿದ ಅವರು, ಸಾರ್ವಜನಿಕರಿಗೆ ಸೌಲಭ್ಯ ಒದಗಿಸಿ ಈ ಪ್ರದೇಶದ ಅಭಿವೃದ್ಧಿಗೆ ರಸ್ತೆ ಕೆಳಸೇತುವೆಗಳು ಕೊಡುಗೆ ನೀಡಲಿದೆ ಎಂದು ಹೇಳಿದ್ದಾರೆ. ಸೇತುವೆಗಳ ನಿರ್ಮಾಣದಲ್ಲಿ ಉತ್ತಮ ಮಾನದಂಡಗಳನ್ನು ಕಾಯ್ದುಕೊಂಡು ನಿಗದಿತ ಸಮಯದೊಳಗೆ ಪೂರ್ಣಗೊಳಿಸುವಂತೆ ಸಂಬಂದಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಮಳೆಗಾಲದಲ್ಲಿ ನೀರು ನಿಲ್ಲದಂತೆ ಹಾಗೂ ಬಹುಕಾಲ ಬಾಳಿಕೆ ಬರುವಂತಹ ರಸ್ತೆಗಳನ್ನು ನಿರ್ಮಾಣ ಮಾಡುವಂತೆ ಗುತ್ತಿಗೆದಾರರಿಗೆ ನಿರ್ದೇಶನ ನೀಡಿದ್ದಾರೆ.

<><><><>

ಜಾತಿ ಗಣತಿ ವಿರುದ್ಧ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಜಾತಿ ಗಣತಿ ಹೆಸರಿನಲ್ಲಿ ಜನರ ನೆಮ್ಮದಿ ಕೆಡಿಸದಂತೆ ಸಲಹೆ ನೀಡಿದ್ದಾರೆ. ಸಾಮಾಜಿಕ ನ್ಯಾಯವೆಂದರೆ, ಒಂದು ನಿರ್ಧಿಷ್ಟ ಸಮಾಜದ ತುಷ್ಟಿಕರಣ, ಜಾತಿ ಸಮೀಕರಣವಲ್ಲ ಎಂದು ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><><>

ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಭಾರತೀಯ ಜನತಾ ಪಾರ್ಟಿ ಹಮ್ಮಿಕೊಂಡ ಜನಾಕ್ರೋಶ ಯಾತ್ರೆಗೆ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಬೆಳಗಾವಿಯಲ್ಲಿ ಇಂದು ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಸರ್ಕಾರ ಜನಹಿತವನ್ನು ಬದಿಗಿಟ್ಟು ೫೦ ಕ್ಕೂ ಅಧಿಕ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡುವುದರ ಮೂಲಕ ಸಾರ್ವಜನಿಕರ ಮೇಲೆ ಹೆಚ್ಚಿನ ಹೊರೆ ಹೇರಿದೆ ಎಂದು ದೂರಿದ್ದಾರೆ. ಪ್ರತಿಪಕ್ಷ ನಾಯಕ ಆರ್. ಅಶೋಕ ಮಾತನಾಡಿ, ರಾಜ್ಯದಲ್ಲಿ ಅಭಿವೃದ್ಧಿ ಶೂನ್ಯ ಸ್ಥಿತಿಗಿಳಿದಿದೆ. ಯಾವ ಸಚಿವರಿಗೂ ಅಭಿವೃದ್ಧಿ ಬೇಕಾಗಿಲ್ಲ ಎಂದು ಆರೋಪಿಸಿದ್ದಾರೆ.

ಧ್ವನಿ: ಆರ್. ಅಶೋಕ

ಇದೇ ವೇಳೆ ಮಾತನಾಡಿದ, ಸಂಸದ ಗೋವಿಂದ ಕಾರಜೋಳ ಪರಿಶಿಷ್ಟರ ೩೮ ಸಾವಿರ ಕೋಟಿ ರೂಪಾಯಿ ಹಣ ದುರುಪಯೋಗ ಮಾಡಿಕೊಳ್ಳಲಾಗಿದೆ ಎಂದು ಆರೋಪಿಸಿದ್ದಾರೆ.

<><><><>

ಮಕ್ಕಳ ಶಾಲಾ ಭರ್ತಿ ವಯೋಮಿತಿ ಗೊಂದಲದಲ್ಲಿದ್ದ ಪೋಷಕರಿಗೆ ರಾಜ್ಯ ಶಿಕ್ಷಣ ಇಲಾಖೆ ಸ್ಪಷ್ಟೀಕರಣ ನೀಡಿದೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಶಿಕ್ಷಣ ಸಚಿವ ಮಧು ಬಂಗಾರಪ್ಪ, ೫ ವರ್ಷ ೫ ತಿಂಗಳು ತುಂಬಿದ ಮಕ್ಕಳಿಗೆ ೧ನೇ ತರಗತಿಗೆ ಸೇರಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ತಿಳಿಸಿದ್ದಾರೆ. ಇದು ಈ ವರ್ಷಕ್ಕೆ ಮಾತ್ರ ಎಂದು ಸ್ಪಷ್ಟಪಡಿಸಿದ್ದಾರೆ. ಮುಂದಿನ ವರ್ಷದಿಂದ ವಯಸ್ಸು ಆರು ವರ್ಷ ಕಡ್ಡಾಯವಾಗಲಿದೆ ಎಂದು ಅವರು ತಿಳಿಸಿದ್ದಾರೆ. ಎಲ್ ಕೆ ಜಿ ನೋಂದಣಿಗೆ ೪ ವರ್ಷದ ಮಿತಿ ಕಲ್ಪಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಎಸ್ ಎಸ್ ಎಲ್ ಸಿ ಪರೀಕ್ಷೆಯನ್ನು ವಿದ್ಯಾರ್ಥಿಗಳು ಮೂರು ಬಾರಿ ಬರೆದರೆ ಅತಿ ಹೆಚ್ಚಿನ ಅಂಕವನ್ನು ಪರಿಗಣಿಸಲಾಗುವುದು ಎಂದು ಸಚಿವರ ಹೇಳಿದ್ದಾರೆ.

ಧ್ವನಿ: ಮಧು ಬಂಗಾರಪ್ಪ

<><><>

ಸರ್ಕಾರದ ಆಶಯವನ್ನು ಅರಿತು ರೈತಾಪಿ ವರ್ಗದ ಶ್ರೇಯೋಭಿವೃದ್ಧಿಗೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಶ್ರಮಿಸಬೇಕು ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ. ಕೃಷಿ ಇಲಾಖೆ ವತಿಯಿಂದ ಬೆಂಗಳೂರು ಮಹಾತ್ಮ ಗಾಂಧಿ ಕೃಷಿ ವಿಜ್ಞಾನ ವಿಶ್ವವಿದ್ಯಾನಿಲಯದ ಸಭಾಂಗಣದಲ್ಲಿ ಏರ್ಪಡಿಸಿದ್ದ ಮುಂಗಾರು ಹಂಗಾಮು ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಬೆಳೆ ವಿಮೆ ಬಗ್ಗೆ ಹೆಚ್ಚಿನ ಅರಿವು ಮೂಡಿಸುವಂತೆ ಕರೆ ನೀಡಿದ್ದಾರೆ. ರಾಜ್ಯವು ತೊಗರಿ ಖನಿಜವಾಗಿ ಬೆಳೆಯಲ್ಲಿ ಗುರಿಹೊಂದಲಾಗಿದ್ದು, ಎಲ್ಲಾ ಕ್ಷೇತ್ರಗಳಿಗೂ ಕೃಷಿ ಭಾಗ್ಯ ಯೋಜನೆ ವಿಸ್ತರಿಸಲಾಗಿದೆ ಎಂದು ತಿಳಿಸಿದ್ದಾರೆ.

<><><>

ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಗ್ರಾಹಕರಿಗೆ ಅಬಾಧಿತ ವಿದ್ಯುತ್ ಸೇವೆಯನ್ನು ನೀಡುತ್ತಾ ಬಂದಿದೆ ಎಂದು ಬೆಸ್ಕಾಂ ಅಧ್ಯಕ್ಷರೂ ಆಗಿರುವ ಶಾಸಕ ರಮೇಶ್ ಬಂಡಿಸಿದ್ದೇಗೌಡ ತಿಳಿಸಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಅವರು, ಬೆಸ್ಕಾಂ ವ್ಯಾಪ್ತಿಯ ೫ ಜಿಲ್ಲೆಗಳಲ್ಲಿ ಪೂರ್ವ ಮುಂಗಾರು ಆರಂಭವಾಗಿ ಅಲ್ಲಲ್ಲಿ ಮಳೆಯಾಗುತ್ತಿದೆ ಎಂದು ತಿಳಿಸಿದ್ದಾರೆ. ಇಂತಹ ಸಂದರ್ಭಗಳಲ್ಲಿ ಅತಿಯಾದ ಗಾಳಿ ಮತ್ತು ಮಳೆಯಿಂದ ವಿದ್ಯುತ್ ಅನಾಹುತಗಳು ಸಂಭವಿಸುವ ಸಾಧ್ಯತೆ ಇದೆ. ಮಳೆಯಿಂದ ಸಂಭವಿಸಬಹುದಾದ ವಿದ್ಯುತ್ ಅವಘಡಗಳು ಹಾಗೂ ತೊಂದರೆಗಳನ್ನು ಎದುರಿಸಲು ಬೆಸ್ಕಾಂ ಸನ್ನದ್ಧವಾಗಿದೆ. ಈ ಸಂಬಂಧ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ನಿಗಮದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

<><><>

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬಾಗಲಕೋಟೆ ಜಿಲ್ಲಾಡಳಿತ ಹಾಗೂ ಕೂಡಲಸಂಗಮ ಅಭಿವೃದ್ಧಿ ಪ್ರಾಧಿಕಾರದ ಜಂಟಿ ಸಹಯೋಗದಲ್ಲಿ ಕೂಡಲಸಂಗಮದಲ್ಲಿ ಇದೇ ೧೯ ಹಾಗೂ ೨೦ ರಂದು "ಅನುಭವ ಮಂಟಪ - ಬಸವಾದಿ ಶರಣರ ವೈಭವ" ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ. ಕಾರ್ಯಕ್ರಮದ ಅಂಗವಾಗಿ ರಥಯಾತ್ರೆ ಆಯೋಜಿಸಿದ್ದು, "ಅನುಭವ ಮಂಟಪ - ಬಸವಾದಿ ಶರಣರ ವೈಭವ" ರಥದ ಸಂಚಾರ ಬೆಂಗಳೂರಿನಿಂದ ಆರಂಭಗೊಳ್ಳಲಿದೆ. ರಥಕ್ಕೆ ನಾಳೆ ವಿಧಾನಸೌಧದ ಮುಂಭಾಗದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಲಿದ್ದಾರೆ. ಬೆಳಗಾವಿ ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿ ಈ ರಥ ಸಂಚರಿಸಲಿದೆ.

<><><><>

ಕೊಡವ ಕುಟುಂಬಗಳ ನಡುವಿನ ಹಾಕಿ ಪಂದ್ಯಾವಳಿಯ ಬೆಳ್ಳಿ ಮಹೋತ್ಸವದ ಸಂಭ್ರಮದ ಹಿನ್ನೆಲೆಯಲ್ಲಿ  ಈ ಬಾರಿ ಮಡಿಕೇರಿಯಲ್ಲಿ ಆಯೋಜಿತವಾಗಿರುವ ಮುದ್ದಂಡ ಕಪ್ ಹಾಕಿ ಉತ್ಸವದಲ್ಲಿ ಮಹಿಳಾ ತಂಡಗಳ ನಡುವೆ ಹಾಕಿ ಪಂದ್ಯಾವಳಿ ಆಯೋಜಿಸಲಾಗಿದೆ. ಇದೇ ೧೭ ರಿಂದ ಮಹಿಳೆಯರ ೫ಎ ಸೈಡ್ ಹಾಕಿ ಉತ್ಸವ ಆರಂಭಗೊಳ್ಳಲಿದೆ ಎಂದು ಮುದ್ದಂಡ ಹಾಕಿ ಉತ್ಸವ ಸಮಿತಿಯ ಅಧ್ಯಕ್ಷ ಮುದ್ದಂಡ ರಶಿನ್ ಸುಬ್ಬಯ್ಯ ತಿಳಿಸಿದ್ದಾರೆ. ಪ್ರಥಮ ಬಾರಿಗೆ ನಡೆಯಲಿರುವ ಕೊಡವ ಕೌಟುಂಬಿಕ  ಮಹಿಳಾ ಹಾಕಿ ಪಂದ್ಯಾವಳಿಗೆ ೫೬ ಮಹಿಳಾ ತಂಡಗಳು ನೋಂದಣಿಯಾಗಿವೆ.

<><><><>

ಬೆಂಗಳೂರು ಸೇರಿದಂತೆ ರಾಜ್ಯದ ಒಳನಾಡಿನ ಹಲವೆಡೆ ಮಳೆಯಾಗಿದೆ. ಹಾವೇರಿ ಹಾಗೂ ಚಿತ್ರದುರ್ಗ ಜಿಲ್ಲೆಯಲ್ಲಿ ೨ ಸೆಂಟಿಮೀಟರ್ ಮಳೆಯಾಗಿದೆ. ಇಂದು ದಕ್ಷಿಣ ಕನ್ನಡ, ಉಡುಪಿ ಜಿಲ್ಲೆಗಳ ಒಂದೆರೆಡು ಕಡೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆ ಇದೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಒಣಹವೆ ಮುಂದುವರೆಯಲಿದೆ. ಬೆಂಗಳೂರಿನಲ್ಲೂ ಗಾಳಿ ಹಾಗೂ ಗುಡುಗು ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>